ಬಸವಕಲ್ಯಾಣ ಕ್ಷೇತ್ರದಲ್ಲಿ ಬರುವ ಪಶೂ ವೈದ್ಯಕೀಯ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವುದು

94 (274) : ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಕೂಬ (ಬಸವಕಲ್ಯಾಣ) ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಪಶುವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು;

ಆ) ಈ ಆಸ್ಪತ್ರೆಗಳ ಪೈಕಿ ಎಷ್ಟು ಮತ್ತು ಯಾವ ಯಾವ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿ ಇದೆ;

ಇ) ಇನ್ನೂ ಎಷ್ಟು ಸಮಯದಲ್ಲಿ ಈ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಮೇರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು)

ಅ) ಒಂದು.

ಆ) ಪಶು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಇರುವುದಿಲ್ಲ.

ಇ) ಮೇಲಿನ ಉತ್ತರದ ಹಿನ್ನಲೆಯಲ್ಲಿ ಉದ್ಭವಿಸುವುದಿಲ್ಲ.

ಬಸವಕಲ್ಯಾಣ ಕ್ಷೇತ್ರ ವ್ಯಾಪ್ತಿಯಲ್ಲಿ ಪಶು ವೈದ್ಯ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು

95 (275) : ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಕೂಬ (ಬಸವಕಲ್ಯಾಣ) ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಕಲ್ಯಾಣ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಶುವೈದ್ಯಕೀಯ ಆಸ್ಪತ್ರೆಗಳ ಗ್ರಾಮವಾರು ಸಂಖ್ಯೆ ಎಷ್ಟು;

ಆ) ಈ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿಯ ಸಂಖ್ಯೆ ಎಷ್ಟು; (ಹುದ್ದೆವಾರು ವಿವರಗಳನ್ನು ಒದಗಿಸುವುದು)

ಇ) ಈ ಪೈಕಿ ಈಗ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ಅಂಕಿ ಅಂಶಗಳನ್ನು ಒದಗಿಸುವುದು)

ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು?

ಶ್ರೀ ವೀರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು)

ಅ) ಬಸವಕಲ್ಯಾಣದಲ್ಲಿ ಒಂದು ಪಶು ಆಸ್ಪತ್ರೆ ಇದೆ.

ಆ)

ಪಶುವೈದ್ಯರ ಹುದ್ದೆಗಳು	ಮಂಜೂರು	ಪಶುವೈದ್ಯಕೀಯೇತರ ಹುದ್ದೆಗಳು	ಮಂಜೂರು
ಸಹಾಯಕ ನಿರ್ದೇಶಕರು	1	ಪಶುವೈದ್ಯಕೀಯ ಮೇಲ್ವಿಚಾರಕರು	1
ಪಶುವೈದ್ಯಾಧಿಕಾರಿಗಳು	2	ಪಶುವೈದ್ಯಕೀಯ ಸಹಾಯಕರು	1